ವಿಷಯ : ಹಾವೇರಿ ಜಿಲ್ಲೆ ರಾಣೆಬೆನ್ನೂರು ತಾಲ್ಲೂಕು, ಹನುಮನಮಟ್ಟಿಯಲ್ಲಿನ ಕೃಷಿ ಸಂಶೋಧನಾ ಕೇಂದ್ರದಲ್ಲಿ ಕೃಷಿ ಮಹಾವಿದ್ಯಾಲಯವನ್ನು ಸ್ಥಾಪಿಸುವ ಮತ್ತು ಬಿ.ಎಸ್ಸಿ (ಕೃಷಿ) ಸ್ನಾತಕ ಪದವಿ ಕಾರ್ಯಕ್ರಮವನ್ನು ಪ್ರಾರಂಭಿಸುವ ಬಗ್ಗೆ.

– – – – –

ಓದಲಾಗಿದೆ :-

ಧಾರವಾಡ ಕೃಷಿ ವಿಶ್ವವಿದ್ಯಾಲಯದ ದಿನಾಂಕ : 10-05-2011, 27-06-2011 ಮತ್ತು 01-07-2011ರ ಪತ್ರಗಳ ಸಂಖ್ಯೆ : ಕುಸ/ಕೃಮವಿ(ಹಾವೇರಿ)/2011-12.

ಪ್ರಸ್ತಾವನೆ :-

ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಕೃಷಿ ಮಹಾವಿದ್ಯಾಲಯಗಳನ್ನು ಸ್ಥಾಪಿಸಲು ಬೇಡಿಕೆ ಇರುತ್ತದೆ. ಕೃಷಿ ವಿಶ್ವವಿದ್ಯಾಲಯಗಳು ಮತ್ತು ಕೃಷಿ ಕಾಲೇಜುಗಳನ್ನು ಸ್ಥಾಪಿಸುವ ವಿಷಯವೂ ಸೇರಿದಂತೆ ಕೃಷಿ ಶಿಕ್ಷಣದ ಅಭಿವೃದ್ಧಿ ಮತ್ತು ಸಂಭಾವ್ಯತೆಯ ಬಗ್ಗೆ ಅಧ್ಯಯನ ಮಾಡಿ ವರದಿ ಸಲ್ಲಿಸುವ ಸಲುವಾಗಿ ಮಾಜಿ ಕುಲಪತಿಯವರಾದ ಡಾ. ಎಸ್. ಬಿಸಲಯ್ಯರವರ ಅಧ್ಯಕ್ಷತೆಯಲ್ಲಿ ಒಂದು ಸಮಿತಿಯನ್ನು ರಚಿಸಲಾಗಿತ್ತು. ಮುಂಬರುವ ವರ್ಷಗಳಲ್ಲಿ ರಾಜ್ಯದಲ್ಲಿ ನೂತನ ಕೃಷಿ ತಾಂತ್ರಿಕತೆ, ಆಹಾರ ಸುರಕ್ಷಿತೆ ಮತ್ತು ಉತ್ತಮ ಒಕ್ಕಲುತನ ಹವ್ಯಾಸಗಳನ್ನು ಅಗತ್ಯವಾಗುವ ಕುಶಲತೆಗೆ ಅನುಗುಣವಾಗಿಸುವ ದೃಷ್ಟಿಯಿಂದ ಸದರಿ ಸಮಿತಿಯು ಹಾವೇರಿ ಜಿಲ್ಲೆಯಲ್ಲಿ ಒಂದು ಕೃಷಿ ಕಾಲೇಜನ್ನು ಸ್ಥಾಪಿಸಲು ಶಿಫಾರಸ್ಸು ಮಾಡಿರುತ್ತದೆ.

ಹಾವೇರಿ ಜಿಲ್ಲೆಯಲ್ಲಿ 7 ತಾಲ್ಲೂಕುಗಳಿದ್ದು ಅನೇಕ ಕೃಷಿ ಮತ್ತು ಕೃಷಿ ಆಧಾರಿತ ಕಸುಬುಗಳು ಇಲ್ಲಿನ ಬಹುತೇಕ ಕುಟುಂಬಗಳಿಗೆ ಜೀವನೋಪಾಯವಾಗಿದ್ದು ವಿಭಿನ್ನ ರೀತಿಯ ಮಣ್ಣಿನ ರಚನೆಯುಳ್ಳ ಈ ಜಿಲ್ಲೆಯಲ್ಲಿ ಕೃಷಿ, ತೋಟಗಾರಿಕೆ ಮತ್ತು ಪ್ಲಾಂಟೇಷನ್ ಬೆಳೆಗಳನ್ನು ಬೆಳೆಯಲು ವಿಫುಲ ಅವಕಾಶಗಳಿವೆ. ಧಾರವಾಡ ಕೃಷಿ ವಿಶ್ವವಿದ್ಯಾಲಯದ ಆಡಳಿತ ವ್ಯಾಪ್ತಿಗೆ ಒಳಪಟ್ಟಿರುವ ಹನುಮಟ್ಟಿ ಕೃಷಿ ಸಂಶೋಧನಾ ಕೇಂದ್ರದ ವ್ಯಾಪ್ತಿಯಲ್ಲಿ 250 ಎಕರೆ ಜಮೀನಿದ್ದು ಉತ್ತಮ ಶಿಕ್ಷಣ, ಸಂಶೋಧನೆ ಮತ್ತು ವಿಸ್ತರಣಾ ಕಾರ್ಯಕ್ರಮಗಳನ್ನು ನಿರ್ವಹಿಸಲು ಉತ್ತಮ ಸಾಧನ ಸಾಮಗ್ರಿಗಳು ಇರುವುದರಿಂದ ಇಲ್ಲಿ ಕೃಷಿ ಮಹಾವಿದ್ಯಾಲಯವನ್ನು ಸ್ಥಾಪಿಸಿದಲ್ಲಿ ಜಿಲ್ಲೆಯ ಮತ್ತು ಅಕ್ಕಪಕ್ಕದ ಜಿಲ್ಲೆಯವರಿಗೆ ಅನುಕೂಲವಾಗುತ್ತದೆ ಎಂಬ ವರದಿ-ಮಾಹಿತಿಯನ್ನು ಮೇಲೆ ಓದಲಾದ ಪತ್ರಗಳಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯವು ಸಲ್ಲಿಸಿರುತ್ತದೆ. ಮುಂದುವರೆದು ಪ್ರಸ್ತುತ ಕೃಷಿ ಸಂಶೋಧನಾ ಕೇಂದ್ರದಲ್ಲಿ ಲಭ್ಯವಿರುವ ಬೋಧಕ ಮತ್ತು ಬೋಧಕೇತರ ವೃಂದದ ಸಿಬ್ಬಂದಿಗಳನ್ನು ಹೆಚ್ಚಿಸಬೇಕಾದ ಹಾಗೂ ಮೂಲ ಸೌಲಭ್ಯಗಳನ್ನು ಒದಗಿಸಲು ಕೈಗೊಳ್ಳಬೇಕಾದ ಕ್ರಮಗಳು ಮತ್ತು ಬೇಕಾದ ಅನುದಾನದ ಬಗ್ಗೆ ಪ್ರಸ್ತಾವನೆಯನ್ನೂ ಸಹ ಸಲ್ಲಿಸಿ ಸರ್ಕಾರದ ಮಂಜೂರಾತಿ ಹಾಗೂ ಅನುಮೋದನೆಯನ್ನು ಕೋರಿರುತ್ತಾರೆ.

**ಸರ್ಕಾರಿ ಆದೇಶ ಸಂಖ್ಯೆ : ಕೃತೋಇ 140 ಕೃವಿವಿ 2011,**

**ಬೆಂಗಳೂರು, ದಿನಾಂಕ : 22/07/2011.**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಮೇಗೆ ಹಾವೇರಿ ಜಿಲ್ಲೆ, ರಾಣೆಬೆನ್ನೂರು ತಾಲ್ಲೂಕು, ಹನುಮನಮಟ್ಟಿಯಲ್ಲಿನ ಕೃಷಿ ವಿಜ್ಞಾನ ಕೇಂದ್ರದಲ್ಲಿ 2011-12ನೇ ಸಾಲಿನಿಂದ ಕೃಷಿ ಮಹಾವಿದ್ಯಾಲಯವನ್ನು ಸ್ಥಾಪಿಸಲು ಮತ್ತು ಬಿ.ಎಸ್ಸಿ (ಕೃಷಿ) ಸ್ನಾತಕ ಪದವಿ ಕಾರ್ಯಕ್ರಮವನ್ನು ಪ್ರಾರಂಭಿಸಲು ಅಗತ್ಯವಾದ ಕ್ರಮಗಳನ್ನು ತೆಗೆದುಕೊಳ್ಳಲು ಸರ್ಕಾರದ ತಾತ್ವಿಕ ಮಂಜೂರಾತಿಯನ್ನು ಈ

ಮೂಲಕ ನೀಡಲಾಗಿದೆ ಮತ್ತು ಈ ಉದ್ದೇಶಕ್ಕಾಗಿ ಪ್ರಸ್ತುತ ಸಾಲಿನಲ್ಲಿ 5.00 ಕೋಟಿ ರೂಪಾಯಿಗಳನ್ನು ಒದಗಿಸಲು ನಿರ್ಧರಿಸಿದ್ದು ಅಗತ್ಯವಾದ ಅನುದಾನವನ್ನು ಪ್ರತ್ಯೇಕ ಲೆಕ್ಕಶೀರ್ಷಿಕೆಯಡಿಯಲ್ಲಿ ಬಿಡುಗಡೆ ಮಾಡಲಾಗುವುದು.

2. ಅನುಬಂಧ-1ರಲ್ಲಿ ವಿವರಿಸಿರುವ (1) ಮೂಲ ಸೌಲಭ್ಯಗಳು, (2) ಕಟ್ಟಡ ದುರಸ್ತಿ ಅಥವಾ ನಿರ್ಮಾಣ, (3) ಪೀಠೋಪಕರಣಗಳು, (4) ಸಿಬ್ಬಂದಿ ವೇತನ ಸೇರಿದಂತೆ ಇತರ ಸಾದಿಲ್ವಾರು ವೆಚ್ಚಗಳ ಬಾಬ್ತು ಒಟ್ಟು 25.00 ಕೋಟಿ ರೂಪಾಯಿಗಳ ಪ್ರಸ್ತಾವನೆಗೆ ತಾತ್ವಿಕ ಅನುಮೋದನೆಯನ್ನು ನೀಡುತ್ತಾ ಕಟ್ಟಡಗಳ ಅಂದಾಜು ವೆಚ್ಚವನ್ನು 5.00 ಕೋಟಿ ರೂಪಾಯಿಗಳಿಗೆ ಸೀಮಿತಗೊಳಿಸುವಂತೆ ನಿರ್ದೇಶಿಸಲಾಗಿದೆ.

3. ಕೃಷಿ ಮಹಾವಿದ್ಯಾಲಯವನ್ನು ಪ್ರಾರಂಭಿಸಲು ಅನುಬಂಧ-2ರಲ್ಲಿ ವಿವರಿಸಿದ 21 ಬೋಧಕರ ಮತ್ತು 35 ಬೋಧಕೇತರರ ಹುದ್ದೆಗಳ ಪೈಕಿ ಈ ಕೆಳಕಂಡ ಹುದ್ದೆಗಳನ್ನು ಹೊರತುಪಡಿಸಿ ಉಳಿದ ಹುದ್ದೆಗಳನ್ನು ಸೃಜಿಸಲು ಅನುಮೋದನೆ ನೀಡುತ್ತಾ ಬೋಧಕೇತರ ವೃಂದದ ಬೆರಳಚ್ಚುಗಾರರ, ಕಾವಲುಗಾರರು, ಅಟೆಂಡರ್, ಗಾರ್ಡನರ್, ರಕ್ಷಕ ಸಿಬ್ಬಂದಿ ಮತ್ತು ವಾಹನ ಚಾಲಕರ ವೃಂದದ ಹುದ್ದೆಗಳನ್ನು ಹಾಗೂ ಬೋಧಕೇತರ ವೃಂದದ ಇತರ ಹುದ್ದೆಗಳನ್ನು ಸೃಜಿಸದೇ ಸಾಧ್ಯವಾದಷ್ಟು ಹುದ್ದೆಗಳನ್ನು ಹೊರಗುತ್ತಿಗೆ ಆಧಾರದಲ್ಲಿ ಪಡೆದುಕೊಳ್ಳುವಂತೆ ಸೂಚಿಸಲಾಗಿದೆ.

4. ಮೇಲ್ಕಂಡ ಆದೇಶವನ್ನು ಆರ್ಥಿಕ ಇಲಾಖೆಯು ದಿನಾಂಕ : 08-07-2011ರ ಟಿಪ್ಪಣಿ ಸಂಖ್ಯೆ : FD 315 Exp-5 2011ರಲ್ಲಿ ಮತ್ತು ಯೋಜನಾ ಇಲಾಖೆಯು ದಿನಾಂಕ : 08-07-2011ರ ಟಿಪ್ಪಣಿ ಸಂಖ್ಯೆ : PD 51 PFO 2011ರಲ್ಲಿ ನೀಡಿರುವ ಸಹಮತಿ ಮತ್ತು ಷರತ್ತುಗಳಿಗೆ ಒಳಪಟ್ಟು ಹಾವೇರಿ ಜಿಲ್ಲೆಯಲ್ಲಿ ಕೃಷಿ ಕಾಲೇಜನ್ನು ಸ್ಥಾಪಿಸಲು ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ ಆಡಳಿತಾತ್ಮಕ ಮಂಜೂರಾತಿಯನ್ನು ಈ ಮೂಲಕ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಕೃಷಿ ಸೇವೆಗಳು)

**ಇವರಿಗೆ :-**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ಆದೇಶವನ್ನು ರಾಜ್ಯಪತ್ರದ ವಿಶೇಷ ಪತ್ರಿಕೆಯಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಕೃಷಿ-ಬಿ ಶಾಖೆಗೆ (ಬಹುಮಹಡಿಗಳ ಕಟ್ಟಡ - 3ನೇ ಹಂತ) ಒದಗಿಸುವಂತೆ ಕೋರಲಾಗಿದೆ.

<u>ಪ್ರತಿಗಳು :-</u>

1. ಮಹಾಲೇಖಪಾಲರು, ಕರ್ನಾಟಕ ಲೆಕ್ಕಪತ್ರ/ತನಿಖೆ-1&2) ಬೆಂಗಳೂರು
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.(ಸಚಿವ ಸಂಪುಟ ಪ್ರಕರಣ ಸಂಖ್ಯೆ:32)
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಕುಲಪತಿಯವರು, ಕೃಷಿ ವಿಶ್ವವಿದ್ಯಾಲಯ, ಕೃಷಿನಗರ, ಧಾರವಾಡ-580 005.
10. ಕುಲಸಚಿವರು, ಕೃಷಿ ವಿಶ್ವವಿದ್ಯಾಲಯ, ಕೃಷಿನಗರ, ಧಾರವಾಡ-580 005.
11. ಕುಲಸಚಿವರು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು ಮತ್ತು ರಾಯಚೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.